ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಲ್ಯಾಪ್‌ಟಾಪ್ ವಿತರಣೆಯ ಕುರಿತು

ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

460 (512) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಉನ್ನತ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಗಿದೆಯೇ ; ವಿತರಿಸಿದ್ದಲ್ಲಿ, ಇದುವರೆವಿಗೂ ಎಷ್ಟು ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಉಚಿತ ಲ್ಯಾಪ್‌ಟಾಪ್‌ಗಳನ್ನು ಯಾವ ಯಾವ ಸಮುದಾಯದ ವಿದ್ಯಾರ್ಥಿಗಳಿಗೆ ನೀಡಲಾಗಿದೆ ; (ವಿವರ ನೀಡುವುದು)

(ಇ) ಯಾವ ಮಾನದಂಡದ ಆಧಾರದ ಮೇಲೆ ಉಚಿತ ಲ್ಯಾಪ್‌ಟಾಪ್‌ಗಳನ್ನು ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದೆ ? (ವಿವರ ನೀಡುವುದು)